**All India Radio: Bangalore**
**Regional Bulletin In Kannada**
**30.03.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.03.2025 / 6.40 p.m.**

**<><><><>**

ಮುಖ್ಯಾಂಶಗಳು

1. ಜಲಸಂರಕ್ಷಣೆ ಅಭಿಯಾನಕ್ಕೆ ಕೈ ಜೋಡಿಸುವಂತೆ ಪ್ರಧಾನಿ ನರೇಂದ್ರ ಮೋದಿ ಮನ್ ಕಿ ಬಾತ್‌ನಲ್ಲಿ ಜನತೆಗೆ ಕರೆ
2. ಫಿಟ್ ಇಂಡಿಯಾ ಕಾರ್ನಿವಲ್ ಉಪಕ್ರಮಗಳಿಂದ ಆರೋಗ್ಯಕರ ಜೀವನಶೈಲಿ ಕುರಿತು ಜಾಗೃತಿ- ಪ್ರಧಾನಿ ಅಭಿಮತ
3. ಮಂಡ್ಯ ಜಿಲ್ಲೆಯಲ್ಲಿ ಮನ್ರೇಗಾ ಅಡಿಯಲ್ಲಿನ ಅಕುಶಲ ಕೆಲಸಗಾರರಿಗೆ ದಿನಗೂಲಿ ದರ ೩೭೦ ರೂಪಾಯಿಗೆ ಹೆಚ್ಚಿಸಿ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯ ಆದೇಶ
4. ಕಟಕ್‌ನಲ್ಲಿ ಹಳಿತಪ್ಪಿದ ಬೆಂಗಳೂರು-ಗುವಾಹಟಿ ಕಾಮಕ್ಯ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ರೈಲು; ಓರ್ವ ವ್ಯಕ್ತಿ ಸಾವು, ಏಳು ಜನರಿಗೆ ಗಾಯ

<><><><>

ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯಮಿ ಇಂದು. ಚೈತ್ರ ನವರಾತ್ರಿ ಇಂದಿನಿಂದ ಪ್ರಾರಂಭವಾಗಲಿದ್ದು, ಈ ಬಾರಿ ವಿಕ್ರಮ ಸಂವತ್ಸರದ ಭಾರತೀಯ ನವ ವರ್ಷವೂ ಆರಂಭವಾಗುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದ ೧೨೦ನೇ ಸಂಚಿಕೆಯಲ್ಲಿ ತಿಳಿಸಿದ್ದಾರೆ. ಪ್ರಧಾನಿ ಅವರು, ಕನ್ನಡ, ಮರಾಠಿ, ತೆಲುಗು, ಹಿಂದಿ ಸೇರಿದಂತೆ ಹಲವು ಭಾಷೆಗಳಲ್ಲಿ ಯುಗಾದಿ ಹಬ್ಬದ ಶುಭಾಶಯ ತಿಳಿಸಿದ್ದಾರೆ. ಹೊಸ ವರ್ಷವನ್ನು ಒಂದೊಂದು ರಾಜ್ಯದಲ್ಲಿ ಒಂದೊಂದು ರೀತಿಯಲ್ಲಿ ವಿಶಿಷ್ಟ ಹೆಸರುಗಳೊಂದಿಗೆ ಬರಮಾಡಿಕೊಳ್ಳುತ್ತಾರೆ. ಇಂದು ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ಯುಗಾದಿ, ಮಹಾರಾಷ್ಟ್ರದಲ್ಲಿ ಗುಡಿಪಾಡ್ವ ಹಬ್ಬವನ್ನು ಬಹಳ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಅದೇ ರೀತಿ ಮುಂದಿನ ಕೆಲವು ದಿನಗಳಲ್ಲಿ, ಅಸ್ಸಾಂನಲ್ಲಿ 'ರೊಂಗಾಲಿ ಬಿಹು', ಬಂಗಾಳದಲ್ಲಿ 'ಪೊಯಿಲಾ ಬೋಯಿಶಾಖ್', ಕಾಶ್ಮೀರದಲ್ಲಿ 'ನವ್ರೇಹ್' ಹೆಸರಿನಲ್ಲಿ ನವ ವರ್ಷ ಆಚರಿಸಲಾಗುತ್ತದೆ ಎಂದು

ತಿಳಿಸಿದ್ದಾರೆ. ಹೊಸ ಹವ್ಯಾಸವನ್ನು ಅಳವಡಿಸಿಕೊಳ್ಳುವ ಜೊತೆಗೆ ತಮ್ಮ ಕೌಶಲ್ಯಗಳನ್ನು ಮತ್ತಷ್ಟು ಬೆಳೆಸಿಕೊಳ್ಳುವ ಸಮಯ ಇದು. ಇಂದು ಕಲಿಯಲು ಸಾಕಷ್ಟು ವೇದಿಕೆಗಳಿವೆ. ಕೇವಲ ಶಾಲೆಯಲ್ಲಿ ಮಾತ್ರ ಕಲಿಯಬೇಕು ಎಂದೇನಿಲ್ಲ. ಯಾವುದೇ ಶಾಲೆ, ಸಾಮಾಜಿಕ ಸಂಸ್ಥೆ ಅಥವಾ ಕೇಂದ್ರಗಳು ಬೇಸಿಗೆ ಚಟುವಟಿಕೆಗಳನ್ನು ಆಯೋಜಿಸುತ್ತಿದ್ದರೆ ಅದನ್ನು #Myholidays ಯಲ್ಲಿ ಹಂಚಿಕೊಳ್ಳಿವಂತೆ ಅವರು ತಿಳಿಸಿದ್ದಾರೆ. ಮಳೆ ಹನಿಗಳನ್ನು ಸಂರಕ್ಷಿಸುವ ಮೂಲಕ ನಾವು ಬಹಳಷ್ಟು ನೀರನ್ನು ವ್ಯರ್ಥ ಮಾಡುವುದನ್ನು ತಪ್ಪಿಸಬಹುದು. ದೇಶದ ಹಲವು ಭಾಗಗಳಲ್ಲಿ ನೀರಿನ ಸಂರಕ್ಷಣೆಗಾಗಿ ಅಭೂತಪೂರ್ವ ಕೆಲಸ ಮಾಡಲಾಗಿದೆ. ಕಳೆದ ೭ ರಿಂದ ೮ ವರ್ಷಗಳಲ್ಲಿ ೧೧ ಶತಕೋಟಿ ಘನ ಮೀಟರ್ ಮತ್ತು ಅದಕ್ಕಿಂತ ಹೆಚ್ಚಿನದನ್ನು ಹೊಸದಾಗಿ ನಿರ್ಮಿಸಲಾದ ಟ್ಯಾಂಕ್‌ಗಳು, ಕೊಳಗಳು ಮತ್ತು ಇತರ ನೀರಿನ ಪುನರ್ಭರ್ತಿ ರಚನೆಗಳ ಮೂಲಕ ನೀರನ್ನು ಸಂರಕ್ಷಿಸಲಾಗಿದೆ ಎಂದರು. ಈ ನಿಟ್ಟಿನಲ್ಲಿ ರಾಜ್ಯದ ಗದಗ ಜಿಲ್ಲೆಯ ಜನರು ರೂಪಿಸಿರುವ ಒಂದು ಮಾದರಿ ಕುರಿತು ಮಾಹಿತಿ ಹಂಚಿಕೊಂಡ ಪ್ರಧಾನಿ, ಕೆಲವು ವರ್ಷಗಳ ಹಿಂದೆ, ಇಲ್ಲಿನ ಎರಡು ಹಳ್ಳಿಗಳ ಕೆರೆಗಳು ಸಂಪೂರ್ಣವಾಗಿ ಬತ್ತಿಹೋಗಿದ್ದವು. ಪ್ರಾಣಿಗಳಿಗೂ ಕುಡಿಯಲು ನೀರು ಇಲ್ಲದಂತಾಗಿತ್ತು. ಕ್ರಮೇಣ ಆ ಕೆರೆ, ಹುಲ್ಲು ಮತ್ತು ಕಸಕಡ್ಡಿಗಳಿಂದ ತುಂಬಿಹೋಯಿತು. ಆದರೆ ಕೆಲವು ಗ್ರಾಮಸ್ಥರು, 'ಮನಸ್ಸಿದ್ದಲ್ಲಿ ಮಾರ್ಗ' ಎಂಬ ಮಾತಿನಂತೆ ಕೆರೆ ಪುನರುಜ್ಜೀವನಗೊಳಿಸಲು ನಿರ್ಧರಿಸಿ, ಕಾರ್ಯ ಪ್ರವೃತ್ತರಾದರು. ಗ್ರಾಮಸ್ಥರ ಈ ಪ್ರಯತ್ನವನ್ನು ನೋಡಿ, ಸುತ್ತಮುತ್ತಲ ಸಾಮಾಜಿಕ ಸಂಸ್ಥೆಗಳು ಸಹ ಅವರೊಂದಿಗೆ ಕೈಜೋಡಿಸಿದವು. ಎಲ್ಲರೂ ಒಗ್ಗೂಡಿ ಕಸಕಡ್ಡಿ ಸ್ವಚ್ಛಗೊಳಿಸಿ, ಹೂಳೆತ್ತುವ ಕೆಲಸ ಮಾಡಿದರು ಎಂದು ತಿಳಿಸಿದ್ದಾರೆ.

**ಧ್ವನಿ: ಪ್ರಧಾನಮಂತ್ರಿ**

ಕೆಲ ಸಮಯದ ನಂತರ ಕೆರೆ ಪ್ರದೇಶವು ಪುನರುಜ್ಜೀನಗೊಂಡಿತು ಎಂದು ಶ್ಲಾಘಿಸಿದರು. ನಿಜಕ್ಕೂ, ಇದು 'catch the rain' ಅಭಿಯಾನದ ಒಂದು ಉತ್ತಮ ಉದಾಹರಣೆಯಾಗಿದೆ. ನೀವು ಕೂಡ ಸಮುದಾಯ ಮಟ್ಟದಲ್ಲಿ ಇಂತಹ ಪ್ರಯತ್ನಗಳಿಗೆ ಕೈಜೋಡಿಸಬಹುದು. ನಿಮ್ಮ ಮನೆಯ ಛಾವಣಿ ಅಥವಾ ಅಂಗಳದಲ್ಲಿ ಪಕ್ಷಿಗಳಿಗೆ ನೀರನ್ನು ಇರಿಸಿ ಎಂದು ಅವರು ಸಲಹೆ ನೀಡಿದ್ದಾರೆ. ಕೆಲವು ದಿನಗಳ ಹಿಂದೆ ಮುಕ್ತಾಯಗೊಂಡ ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟದಲ್ಲಿ, ಕೀಡಾಪಟುಗಳು ತೋರಿದ ಸಮರ್ಪಣೆ ಮತ್ತು ಪ್ರತಿಭೆಯ ಮೂಲಕ ಎಲ್ಲರನ್ನೂ

ಅಚ್ಚರಿಗೊಳಿಸಿದ್ದಾರೆ. ಇದರಿಂದ ಪ್ಯಾರಾ ಸ್ಪೋರ್ಟ್ಸ್ ಎಷ್ಟು ಜನಪ್ರಿಯವಾಗುತ್ತಿದೆ ಎಂಬುದು ತಿಳಿಯುತ್ತದೆ. ಈ ಪಂದ್ಯಗಳಲ್ಲಿ ನಮ್ಮ ವಿಶೇಷಚೇತನ ಆಟಗಾರರು ೧೮ ರಾಷ್ಟ್ರೀಯ ದಾಖಲೆಗಳನ್ನು ಮಾಡಿದರು. ಅವುಗಳಲ್ಲಿ ೧೨ ಮಹಿಳಾ ಆಟಗಾರ್ತಿಯರ ಸಾಧನೆಯಾಗಿದೆ ಎಂದು ಅವರು ತಿಳಿಸಿದ್ದಾರೆ. 'ಜವಳಿ ತ್ಯಾಜ್ಯ'. ಸವಾಲಿನ ಬಗ್ಗೆ ಮಾತನಾಡಿದ ಪ್ರಧಾನಿ, ವಾಸ್ತವದಲ್ಲಿ ಜವಳಿ ತ್ಯಾಜ್ಯ ಇಡೀ ವಿಶ್ವಕ್ಕೆ ಒಂದು ಹೊಸ ಚಿಂತೆಗೆ ಪ್ರಮುಖ ಕಾರಣವಾಗಿದೆ. ಇತ್ತೀಚಿನ ದಿನಗಳಲ್ಲಿ ನೀವು ಧರಿಸದೇ ಬಿಟ್ಟ ಹಳೆಯ ಬಟ್ಟೆಗಳು ಜವಳಿ ತ್ಯಾಜ್ಯವಾಗಿ ಮಾರ್ಪಾಡಾಗುತ್ತಿವೆ. ಈ ವಿಷಯದ ಬಗ್ಗೆ ಅನೇಕ ಜಾಗತಿಕ ಸಂಶೋಧನೆಗಳು ನಡೆಯುತ್ತಿದ್ದು, ವಿಶ್ವದಲ್ಲಿ ಅತ್ಯಂತ ಹೆಚ್ಚು ಜವಳಿ ತ್ಯಾಜ್ಯ ಹೊರಬೀಳುವ ದೇಶಗಳ ಪೈಕಿ ಭಾರತ ಮೂರನೇ ಸ್ಥಾನದಲ್ಲಿದೆ. ಬೆಂಗಳೂರು ಕೂಡಾ ಆವಿಷ್ಕಾರಕ ತಂತ್ರಜ್ಞಾನ ಪರಿಹಾರಗಳಿಂದ ತನ್ನದೇ ಆದ ಗುರುತು ಮೂಡಿಸುತ್ತಿದೆ. ಇಲ್ಲಿ ಅರ್ಧಕ್ಕಿಂತ ಹೆಚ್ಚು ಜವಳಿ ತ್ಯಾಜ್ಯವನ್ನು ಸಂಗ್ರಹಿಸಲಾಗುತ್ತಿದ್ದು, ಇತರ ನಗರಗಳಿಗೂ ಇಂದು ಒಂದು ಮಾದರಿಯಾಗಿದೆ ಎಂದು ಪ್ರಧಾನಿ ಶ್ಲಾಘಿಸಿದ್ದಾರೆ. ಯೋಗ ದಿನಕ್ಕೆ ಈಗ ೧೦೦ ದಿನಗಳಿಗಿಂತ ಕಡಿಮೆ ಸಮಯ ಉಳಿದಿದೆ. ನೀವು ಇದುವರೆಗೂ ನಿಮ್ಮ ಜೀವನದಲ್ಲಿ ಯೋಗಾಬ್ಯಾಸ ಸೇರಿಸಿಕೊಂಡಿಲ್ಲವೆಂದಾದಲ್ಲಿ, ಈಗಲೇ ನಿಮ್ಮ ದಿನಚರಿಯಲ್ಲಿ ಯೋಗವನ್ನು ಸೇರಿಸಿಕೊಳ್ಳಿ, ೧೦ ವರ್ಷಗಳ ಹಿಂದೆ ೨೦೧೫ರ ಜೂನ್ ೨೧ ರಂದು ಪ್ರಥಮ ಯೋಗ ದಿನ ಆಚರಿಸಲಾಯಿತು. ಈಗ ಯೋಗವು ಒಂದು ಭವ್ಯ ಉತ್ಸವವಾಗಿ ರೂಪುಗೊಂಡಿದೆ. ೨೦೨೫ರ ಯೋಗ ದಿನದ ಘೋಷವಾಕ್ಯವೆಂದರೆ 'ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎನ್ನುವುದಾಗಿದೆ' ಇಡೀ ವಿಶ್ವವನ್ನು ಯೋಗದಿಂದ ಆರೋಗ್ಯ ಪೂರ್ಣವನ್ನಾಗಿ ಮಾಡಬೇಕೆಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

**ಧ್ವನಿ : ಪ್ರಧಾನಮಂತ್ರಿ ನರೇಂದ್ರ ಮೋದಿ**

ದೆಹಲಿಯಲ್ಲಿ ಆಯೋಜಿಸಲಾಗಿದ್ದ ಫಿಟ್ ಇಂಡಿಯಾ ಕಾರ್ನಿವಲ್ ಬಗ್ಗೆ ಅವರು ಉಲ್ಲೇಶಿಸಿದ್ದು, ಈ ಕಾರ್ಯಕ್ರಮದಿಂದ ದೇಶಾದ್ಯಂತ ಜನರು ಆರೋಗ್ಯ ಮಾತ್ರವಲ್ಲದೆ, ಪೋಷಣೆ ಕುರಿತಾದ ಅರಿವನ್ನು ಪಡೆದುಕೊಂಡಿದ್ದಾರೆ. ಹಾಗಾಗಿ ದೇಶಾದ್ಯಂತ ಇಂತಹ ಕಾರ್ನಿವಲ್‌ಗಳನ್ನು ಆಯೋಜಿಸುವುದು ಸೂಕ್ತ. ಅಲ್ಲದೆ ಇತ್ತೀಚೆಗೆ ದೇಶೀಯ ಆಟಗಳು ನಮ್ಮ ಜನಪ್ರೀಯ ಸಂಸ್ಕೃತಿಯ ಭಾಗವಾಗುತ್ತಿದೆ. ಇದರಲ್ಲಿ ಕೇರಳದ ಕಲರಿಪಟ್ಟುವಿನಂತಹ ಸಮಹ ಕಲೆಗಳನ್ನು

ಜನಪ್ರಿಯಗೊಳಿಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಇದರಿಂದಾಗಿ ನಮ್ಮ ದೇಶಿಯ ಸಂಸ್ಕೃತಿಯನ್ನು ಜನರಿಗೆ ಪರಿಚಯಿಸಲಾಗುತ್ತಿದೆ ಎಂದು ಪ್ರಧಾನಿ ತಿಳಿಸಿದ್ದಾರೆ.

<><><><>

ಮಂಡ್ಯ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ಗ್ರಾಮೀಣ ಅಕುಶಲ ಕೆಲಸಗಾರರ ದಿನಗೂಲಿ ದರವನ್ನು ೨೭೦ ರೂಪಾಯಿಗೆ ಹೆಚ್ಚಳ ಮಾಡಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ ಆದೇಶ ಹೊರಡಿಸಿದೆ ಎಂದು ಮಂಡ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನಂದಿನಿ ಕೆ.ಆರ್. ತಿಳಿಸಿದ್ದಾರೆ. ೨೦೨೪-೨೫ ನೇ ಸಾಲಿನಲ್ಲಿ ನರೇಗಾ ಯೋಜನೆಯಡಿ ಕೂಲಿ ಕೆಲಸ ಮಾಡುವ ಕೂಲಿ ಕಾರ್ಮಿಕರ ದಿನಗೂಲಿ ದರ ೩೪೯ ರೂಪಾಯಿಗಳಿದ್ದು, ೨೦೨೫-೨೬ನೇ ಸಾಲಿನಲ್ಲಿ ಏಪ್ರಿಲ್ ೦೧ ರಿಂದ ೩೭೦ ರೂಪಾಯಿಗಳ ದಿನಗೂಲಿ ದರವನ್ನು ನಿಗಧಿಪಡಿಸಿದೆ ಎಂದರು. ಮನರೇಗಾ ಯೋಜನೆಯಡಿ ಗ್ರಾಮೀಣ ಪ್ರದೇಶದ ಪತ್ರಿ ಅರ್ಹ ಕುಟುಂಬಕ್ಕೂ ಒಂದು ಆರ್ಥಿಕ ವರ್ಷದಲ್ಲಿ ೧೦೦ ದಿನಗಳ ಅಕುಶಲ ಕೂಲಿ ಕೆಲಸ ಕೊಡಲಾಗುತ್ತದೆ. ಒಂದು ಕುಟುಂಬ ವರ್ಷದಲ್ಲಿ ನೂರು ದಿನ ಕೆಲಸ ಮಾಡಿದರೆ ೩೭ ಸಾವಿರ ರೂಪಾಯಿಗಳ ಕೂಲಿ ಹಣ ಪಡೆದುಕೊಳ್ಳಬಹುದು ಎಂದು ಅವರು ತಿಳಿಸಿದರು.

<><><><>

ಒಡಿಶಾದಲ್ಲಿ, ಬೆಂಗಳೂರು-ಗುವಾಹಟಿ ಕಾಮಖ್ಯಾ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ರೈಲಿನ ೧೧ ಕೋಚ್‌ಗಳು ಇಂದು ಕಟಕ ಜಿಲ್ಲೆಯ ನಿಘುಂಡಿ ರೈಲು ನಿಲ್ದಾಣದ ಬಳಿ ಹಳಿ ತಪ್ಪಿದೆ. ಪ್ರಾಥಮಿಕ ವರದಿಗಳ ಪ್ರಕಾರ, ಒಬ್ಬ ವ್ಯಕ್ತಿ ಮೃತಪಟ್ಟಿದ್ದು, ಕನಿಷ್ಠ ಏಳು ಜನರು ಗಾಯಗೊಂಡಿದ್ದಾರೆ. ಗಾಯಗೊಂಡ ಪ್ರಯಾಣಿಕರನ್ನು ಕಟಕದಲ್ಲಿರುವ ಎಸ್‌ಸಿಬಿ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ರೈಲು ಬೆಂಗಳೂರಿನಿಂದ ಕಾಮಖ್ಯಾಕ್ಕೆ ಪ್ರಯಾಣ ಬೆಳೆಸಿತ್ತು. ಭಾರತೀಯ ರೈಲ್ವೆ ವರಿಷ್ಠ ಅಧಿಕಾರಿಗಳು ಅಪಘಾತ ಸ್ಥಳಕ್ಕೆ ಆಗಮಿಸಿದ್ದು, ರಕ್ಷಣೆ ಮತ್ತು ಸಹಾಯ ಕಾರ್ಯಾಚರಣೆಗಳು ಮುಂದುವರೆದಿವೆ. ವೈದ್ಯಕೀಯ ತಂಡಗಳು, ಎನ್‌ಡಿಆರ್‌ಎಫ್ ಮತ್ತು ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ರವಾನಿಸಲಾಗಿದೆ. ರೈಲಿನ ಅಡಿಯಲ್ಲಿ ಸಿಲುಕಿರುವ ಪ್ರಯಾಣಿಕರನ್ನು ರಕ್ಷಿಸಿ ಅವರ ಸ್ಥಳಗಳಿಗೆ ಸುರಕ್ಷಿತವಾಗಿ ತಲುಪುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ವರದಿಯಲ್ಲಿ ದಾಖಲಾಗಿದೆ.

<><><><>

ವಿಜಯಪುರ ಜಿಲ್ಲೆಯ ಬಬಲೇಶ್ವರ ಶಾಖಾ ಕಾಲುವೆ ಪ್ರದೇಶಕ್ಕೆ ನೀರೋದಗಿಸುವ ಕಾಮಗಾರಿಗೆ ೧೨೭ ಕೋಟಿ ಹಾಗೂ ವಿತರಣಾ ಸಂಖ್ಯೆ ೧೫ ಮತ್ತು ಲ್ಯಾಟರಲ್ ಒಳಗೊಂಡ ೧೩ ಸಾವಿರದ ೨೭೨ ಎಕರೆ ಪ್ರದೇಶಕ್ಕೆ ನೀರಾವರಿ ಕಲ್ಪಿಸುವ ಕಾಮಗಾರಿ ಕೈಗೆತ್ತಿಕೊಳ್ಳಲು ೧೦೮ ಕೋಟಿ ವೆಚ್ಚದ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಶ್ರೀಘ್ರದಲ್ಲಿ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ.

<><><><>

ರಾಜ್ಯದ ಉತ್ತರ ಒಳನಾಡು ಮತ್ತು ದಕ್ಷಿಣ ಒಳನಾಡುಗಳಲ್ಲಿ ಪ್ರತ್ಯೇಕ ಸ್ಥಳಗಳಲ್ಲಿ ಮಳೆಯಾಗಿದ್ದು, ಕರಾವಳಿ ರಾಜ್ಯದಾದ್ಯಂತ ಒಣ ಹವೆ ಇತ್ತು. ಧಾರವಾಡ ಮತ್ತು ಚಿಕ್ಕಮಗಳೂರಿನ ಕೊಪ್ಪ ದಲ್ಲಿ ತಲಾ ೧ ಸೆಂಟಿಮೀಟರ್ ಮಳೆಯಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>